# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿದೇಸಾಯಿ ವಸತಿ ಶಾಲೆ/ ವಸತಿ ಕಾಲೇಜುಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಹಿಂಪಡೆಯುವ ಬಗ್ಗೆ.

**ಓದಲಾದ:**
1) ಸರ್ಕಾರಿ ಆದೇಶ ಸಂ: ಇಡಿ/181/ಯೋಯೋಕಾ/1998, ಬೆಂಗಳೂರು, ದಿ: 12.01.1999.
2) ದಿನಾಂಕ: 26.11.2013 ರಂದು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯು ನೀಡಿರುವ 14ನೇ ಮಧ್ಯಂತರ ವರದಿ.
3) 8ನೇ ರಾಜ್ಯ ಮಟ್ಟದ 15 ಅಂಶಗಳ ಕಾರ್ಯಕ್ರಮದ ಸಮಿತಿಯ ದಿನಾಂಕ: 04.06.2014ರಂದು ನಡೆದ ಸಭೆಯ ನಡವಳಿಗಳು.
4) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಔಕಾಫ್ ಸಚಿವರ ಟಿಪ್ಪಣಿ ಸಂಖ್ಯೆ: ಹೆಚ್‌ಒ/ಎಂ.ಕೆ.ಬಿ/234/2015, ದಿನಾಂಕ: 17.01.2015.
5) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕ ಕಡತ ಸಂಖ್ಯೆ: ಅಸಂನಿ/ಮೊ.ದೇ.ವ.ಶ/ಹಿಂಪ/ಸಿಆರ್-189/2014-15 ದಿನಾಂಕ: 27.02.2015

## ಪ್ರಸ್ತಾವನೆ:-

ರಾಜ್ಯದಲ್ಲಿ ಅಲ್ಪಸಂಖ್ಯಾತರ ಶೈಕ್ಷಣಿಕ ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ಗ್ರಾಮೀಣ ಪ್ರದೇಶದ ಅಲ್ಪಸಂಖ್ಯಾತ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಸತಿ ಸಹಿತ ಶಿಕ್ಷಣ ನೀಡುವ ಘನ ಉದ್ದೇಶದಿಂದ ರಾಜ್ಯ ಸರ್ಕಾರವು ರಾಜ್ಯದಲ್ಲಿ ಅಲ್ಪಸಂಖ್ಯಾತರ ಇಲಾಖಾವತಿಯಿಂದ ಒಟ್ಟು 53 ಮೊರಾರ್ಜಿದೇಸಾಯಿ ವಸತಿ ಶಾಲೆಗಳು ಹಾಗೂ 5 ಪದವಿ ಪೂರ್ವ ಕಾಲೇಜುಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ತೆರೆಯಲಾಗಿದ್ದು ಸುಮಾರು 12980 ವಿದ್ಯಾರ್ಥಿಗಳು ಉಚಿತ ಶಿಕ್ಷಣ ಸೌಲಭ್ಯ ಪಡೆಯುತ್ತಿದ್ದಾರೆ. ಸದರಿ ವಸತಿ ಶಾಲೆಗಳು ದಿ: 31.03.2011ರವರೆಗೆ ಜಿಲ್ಲಾ ವಲಯ ಕಾರ್ಯಕ್ರಮದಡಿ ಜಿಲ್ಲಾ ಪಂಚಾಯತ್‌ನ ಮೇಲ್ವಿಚಾರಣೆಯಲ್ಲಿತ್ತು. ದಿನಾಂಕ: 01.04.2011ರಿಂದ ನಿರ್ವಹಣೆ ಹಾಗೂ ಆಡಳಿತವನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಉಲ್ಲೇಖ (1) ಆದೇಶದಂತೆ ನಿರ್ವಹಿಸಲಾಗುತ್ತಿದೆ.

ಈ ಶಾಲಾ ಕಾಲೇಜುಗಳ ನಿರ್ವಹಣೆಯನ್ನು ದಿನಾಂಕ: 31.03.2011ರವರೆಗೆ ಜಿಲ್ಲಾ ಪಂಚಾಯತ್ ಮೇಲ್ವಿಚಾರಣೆಯಿಂದ ನಡೆಸಲಾಗುತ್ತಿತು. ದಿನಾಂಕ: 01.04.2011 ರಿಂದ ಈ ಶಾಲಾ ಕಾಲೇಜುಗಳ ಮೇಲ್ವಿಚಾರಣೆ ಹಾಗೂ ನಿರ್ವಹಣೆಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು ಇವರಿಂದ ನಿರ್ವಹಿಸಲಾಗುತ್ತಿದೆ.

ಪ್ರಸ್ತುತ ಇಲಾಖಾವತಿಯಿಂದ ವಸತಿ ಶಾಲೆಗಳ ನಿರ್ವಹಣೆಗಾಗಿ ಅನುದಾನವು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಬಿಡುಗಡೆಯಾಗುತ್ತಿದ್ದು ನಂತರ ಆಯಾ ಶಾಲಾ ಕಾಲೇಜುಗಳಿಗೆ ಬಿಡುಗಡೆಯಾಗುತ್ತಿದೆ. ಈ ವ್ಯವಸ್ಥೆಯಲ್ಲಿ ಅನುದಾನ ಬಿಡುಗಡೆ ಪ್ರಕ್ರಿಯೆಯಲ್ಲಿ

ವಿಳಂಬವಾಗುತ್ತಿರುವುದರಿಂದ ಸರ್ಕಾರದ ಯೋಜನೆಯನ್ನು ಸಮರ್ಪಕ ಹಾಗೂ ಸಕಾಲದಲ್ಲಿ ಬಳಕೆಯಾಗದೆ ವಸತಿ ನಿಲಯದ ವಿದ್ಯಾರ್ಥಿಗಳು ಹಲವಾರು ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಈಗಾಗಲೇ ವಸತಿ ಶಾಲೆ/ಕಾಲೇಜುಗಳ ಪ್ರಾಂಶುಪಾಲರು/ಭೋಧಕ,ಭೋಧಕೇತರ ಸಿಬ್ಬಂದಿ ನೇಮಕಾತಿಗಾ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, ನಿರ್ದೇಶನಾಲಯದಲ್ಲಿ ಸಾಕಷ್ಟು ಹುದ್ದೆಗಳು ಹಾಗೂ ಸಿಬ್ಬಂದಿಗಳನ್ನು ಹೆಚ್ಚುವರಿಯಾಗಿ ಸೃಜಿಸಲಾಗಿದ್ದು ಸದರಿ ವಸತಿ ಶಾಲೆ/ಕಾಲೇಜುಗಳ ಜವಾಬ್ದಾರಿಯನ್ನು ನಿರ್ವಹಿಸಬಹುದಾಗಿದೆ ಎಂದು ನಿರ್ದೇಶಕರು ತಿಳಿಸಿರುತ್ತಾರೆ.

ಮೇಲೆ (2) ಮತ್ತು (3)ರಲ್ಲಿ ಓದಲಾದ, ನಡವಳಿ ಹಾಗೂ ವರದಿಯಲ್ಲಿ ತಿಳಿಸಿರುವಂತೆ ಮಾನ್ಯ ಮುಖ್ಯಕಾರ್ಯದರ್ಶಿಗಳು 8ನೇ ರಾಜ್ಯಮಟ್ಟದ ಪ್ರಧಾನಮಂತ್ರಿಗಳ 15 ಅಂಶಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ವಸತಿ ಶಾಲೆಗಳ ನಿರ್ವಹಣೆಯಲ್ಲಿ ದೂರುಗಳ ಬಗ್ಗೆ ಸಾಕಷ್ಟು ಚರ್ಚೆಯಾಗಿದ್ದು ಹಾಗೂ ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮಧ್ಯಂತರ ವರದಿ ಸಲ್ಲಿಸಿದ್ದು ಅದರನ್ವಯ ಸಂಸ್ಥೆಯ ನಿರ್ವಹಣೆ ಬಗ್ಗೆ ಅತೃಪ್ತಿ ವ್ಯಕ್ತಪಡಿಸಿ ಸದರಿ ವಸತಿ ಶಾಲೆ/ಕಾಲೇಜುಗಳನ್ನು ಅಲ್ಪಸಂಖ್ಯಾತರ ಕಲ್ಯಾಣ ವಸತಿ ನಿರ್ದೇಶನಾಲಯಕ್ಕೆ ಹಿಂಪಡೆಯಲು ನಿರ್ದೇಶಿಸಲಾಗಿದೆ.

ಮೇಲೆ (4) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಹಾಗೂ ಕಲಬುರಗಿ ಉಸ್ತುವಾರಿ ಸಚಿವರು ಈ ವಸತಿ ಶಾಲೆ ಕಾಲೇಜುಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಹಿಂಪಡೆದು ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ನಿರ್ವಹಿಸುವ ನಿಟ್ಟಿನಲ್ಲಿ ಕೂಡಲೇ ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿರುತ್ತಾರೆ.

ಈಗಾಗಲೇ ಸರ್ಕಾರದ ಆದೇಶ ಸಂಖ್ಯೆ: MWD 346 MDS 2014,ದಿನಾಂಕ: 24.07.2014ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ 05 ಮುಸ್ಲಿಂ ವಸತಿ ಶಾಲೆಗಳ ನಿರ್ವಹಣೆಯನ್ನು ಹಿಂದಕ್ಕೆ ಪಡೆದು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನಕ್ಕೆ ನೀಡಲಾಗಿದೆ.

ಮೇಲೆ (5)ರಲ್ಲಿ ಓದಲಾದ ನಿರ್ದೇಶಕರ ಪತ್ರದಲ್ಲಿ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಿದ್ದು ಇದನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: MWD 37 MDS 2015, ಬೆಂಗಳೂರು ದಿನಾಂಕ: 09.03.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪ್ರಸ್ತುತ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೇಲ್ ಉಸ್ತುವಾರಿಯಲ್ಲಿ ನಡೆಯುತ್ತಿರುವ, ಅನುಬಂಧದಲ್ಲಿ ಲಗತ್ತಿಸಿರುವ ಅಲ್ಪಸಂಖ್ಯಾತರ 53 ಮೊರಾರ್ಜಿದೇಸಾಯಿ ವಸತಿ ಶಾಲೆ ಹಾಗೂ 05 ಪದವಿ ಪೂರ್ವ ವಸತಿ ಕಾಲೇಜುಗಳ ನಿರ್ವಹಣೆಯನ್ನು ತಕ್ಷಣದಿಂದ ಹಿಂದಕ್ಕೆ ಪಡೆದು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನಕ್ಕೆ ಕೆಳಕಂಡ ಷರತ್ತುಗೊಳಪಟ್ಟು ನೀಡಿ ಆದೇಶಿಸಿದೆ.

ಸರ್ಕಾರಿ ಆದೇಶ ಸಂ: ದಿ: ರ ಆದೇಶ ರದ್ದುಪಡಿಸಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ 53 ಮೊರಾರ್ಜಿದೇಸಾಯಿ ವಸತಿ ಶಾಲೆ ಹಾಗೂ 5 ಪದವಿ ಪೂರ್ವ ಕಾಲೇಜುಗಳ